# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಡ್ರಾಮಿ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ. ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ–ಅಂತಿಮ ಆದೇಶ ಹೊರಡಿಸುವ ಬಗ್ಗೆ–ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/769/ಗ್ರಾಪಂಕಾ/2016 ದಿನಾಂಕ:06.01.2017
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1/DE/55/2017/ARE-10 Date:24.10.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/55/2017/ARE-10 Date:26.10.2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/769/ಗ್ರಾಪಂಕಾ/2016 ದಿನಾಂಕ:10.11.2017.
5. ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 01.12.017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಡ್ರಾಮಿ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

That, you DGO, Sri Babagowda Patil, the then Panchayath Develpoment Officer, Yadrami Gram Panchayath, Jewargi Taluk, Kalaburgi District, by creating the document illegally transferred the Khata of property bearing No.5-16 of Yadrami Village, Jewargi Taluk, into the name of Sri. Mallikarjuna Bheemaiah Kusthi by making illegal insertions into the demand register-Form No.12.

Thus you DGO, being a Government servant failed to maintain absolute integrity besides devotion to duty and acted in a manner unbecoming of a Government servant and thus committed misconduct as enumerated U/R 3(1) of Karnataka Civil Service(Conduct) Rules 1966.

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಡ್ರಾಮಿ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಬಾಬಗೌಡ ಪಾಟೀಲ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುವ ವೇಳೆಯಲ್ಲಿ ಆಸ್ತಿ ನಂ. 5-16 ರ ಖಾತಾ ಬದಲಾವಣೆಯನ್ನು ಕಾನೂನುಬಾಹಿರವಾಗಿ ದಾಖಲೆಗಳನ್ನು ಸೃಷ್ಟಿಸಿ, ಶ್ರೀ ಮಲ್ಲಿಕಾರ್ಜುನ ಭೀಮಯ್ಯ ಕುಸ್ತಿ ರವರ ಹೆಸರಿಗೆ ಕಾನೂನು ಬಾಹಿರವಾಗಿ ಬೇಡಿಕೆ ವಹಿಯಲ್ಲಿ ನಮೂದಿಸಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ ಆದ್ದರಿಂದ ಇದನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

In the cross examination, DW 1 admits that Yadrami gram Panchayath property no.5-16 is the ancestral property of complainant. He denies that during his tenure he has rounded off the name of Yashvantha and illegally inserted the name of Mallikarjuna Bheemayya Kusti into form no.12. He admits that on 27.07.2009 he was working as Secretary in Yadrami gram Panchayath. He denies that on the same date the name of complainant was rounded off and name of Mallikarjuna Bheemayya Kusti is inserted and denies that to escape from the liability, he is deposing falsely.

Admittedly Yadrami panchayath property No. 5-16 is the ancestral property of the complaint. Form No.12 for the year 2005-06, 2007-08 show that the property was standing in the name of Sri. Yashwanth/Yankaiah. Copy of form No.12, Ex P 14 shows that subsequently the name of Yahwanth/Yankaiah is rounded off and the name of Sri. Mallikarjuna Bheemaiah Kusthi is written, Form No.12 for the year 2016-17 shows the name of Mallikarjun Bheemaiah Kusthi against property No. 5-16.

DGO has taken the contention that during his tenure he has not changed the name of Yashwanth was rounded off and the name of Mallikarjuna S/o Bheemaiah susthi is written, as on 27.07.2009, He has not passed any mutation order from the name of Yahwanth to Mallikarjun. He has not changed the name in form No.12 and after his transfer the bill collector has made entries in demand register extracts.

It is suggested to PW1 that the bill collector has written the khata register extract and taken the his signature of DGO. DGO is the custodian of the property register extracts. When he has put his signature to the khata change register, he had to verify whether the contents are true and correct. Therefore the contention of the DGO that the bill collector has made entries in demand register extract cannot be accepted.

The oral and documentary evidence on record clearly reveals that the DGO by creating the documents illegally transferred the Khata of property bearing No.5-16

of Yadrami Village, Jewargi taluk into the name of Mallikarjuna Bheemaiah Kusthi by making illegal insertions into the demand register-Form No.12.

Thereby the DGO being Government/Public servant has failed to maintain absolute integrity besides devotion to duty and acted in a manner unbecoming of a government servant.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಡ್ರಾಮಿ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರ ನಿರ್ಣಯವನ್ನು ಅಂಗೀಕರಿಸಿದೆ ಮತ್ತು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಡ್ರಾಮಿ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರಿಗೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:769:ಗ್ರಾಪಂಕಾ2017 ಬೆಂಗಳೂರು, ದಿನಾಂಕ-06-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ ರವರು ಯಡ್ರಾಮಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುವ ವೇಳೆಯಲ್ಲಿ ಆಸ್ತಿ ನಂ. 5-16 ರ ಖಾತಾ ಬದಲಾವಣೆಯನ್ನು ಕಾನೂನುಬಾಹಿರವಾಗಿ ದಾಖಲೆಗಳನ್ನು ಸೃಷ್ಟಿಸಿ, ಶ್ರೀ ಮಲ್ಲಿಕಾರ್ಜುನ ಭೀಮಯ್ಯ ಕುಸ್ತಿ ರವರ ಹೆಸರಿಗೆ ಕಾನೂನು ಬಾಹಿರವಾಗಿ ಬೇಡಿಕೆ ವಹಿಯಲ್ಲಿ ನಮೂದಿಸಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/4/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ.
6. ಶ್ರೀ ಬಾಬಗೌಡ ಪಾಟೀಲ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಡ್ರಾಮಿ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.